ಅ) ಭದ್ರಾವತಿ ತಾಲ್ಲೂಕಿನ ಕೂಡ್ಲಿಗೆರೆ, ಅಂತರಗಂಗೆ ಮತ್ತು ಕಲ್ಲಹಳ್ಳಿ ಗ್ರಾಮಗಳಿಗೆ ರಾಜೀವ್‌ಗಾಂಧಿ ಕುಡಿಯುವ ನೀರು ಸರಬರಾಜು ಯೋಜನೆಯಡಿಯಲ್ಲಿ ನೀರಿನ ಪೂರೈಕೆಗೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆ ಅನುಷ್ಠಾನಕ್ಕೆ ವಿಳಂಬವಾಗಲು ಕಾರಣಗಳೇನು; ಈ ಯೋಜನೆ ಯಾವ ಹಂತದಲ್ಲಿದೆ;

ಇ) ಗ್ರಾಮೀಣ ಪ್ರದೇಶ ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ಈ ರಸ್ತೆಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆಗಾಗಿ ಅನೇಕ ಬಾರಿ ಪತ್ರವನ್ನು ಬರೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಅನುದಾನ ಬಿಡುಗಡೆ ವಿಳಂಬಕ್ಕೆ ಕಾರಣಗಳೇನು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಬಂದಿದೆ.

ಆ) ಕೂಡ್ಲಿಗೆರೆ ಮತ್ತು ಇತರೆ 18 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಗೆ ಅನುಮೋದನೆ ನೀಡಲಾಗಿದೆ. ವಿವರಣಾತ್ಮಕ ಅಂದಾಜು ಪಟ್ಟಿ ತಯಾರಿಸಲಾಗುತ್ತಿದೆ. ಅಂತರಗಂಗೆ ಮತ್ತು ಕಲ್ಲಹಳ್ಳಿ ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯ ಪ್ರಸ್ತಾವನೆಯ ಪ್ರಾಥಮಿಕ ಸಮೀಕ್ಷಾ ವರದಿ CE/PRED ಪರಿಶೀಲನೆಯಲ್ಲಿದೆ.

ಇ) ಬಂದಿದೆ.

ಈ) ಅನುದಾನ ಲಭ್ಯತೆ ಆಧರಿಸಿ ಚಾಲ್ತಿ ಮಾರ್ಗಸೂಚಿಗಳನ್ವಯ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಹಣ ಬಿಡುಗಡೆಯಾಗುತ್ತಿದೆ.

ಮಕ್ಕಳ ಗ್ರಂಥಾಲಯ ಸ್ಥಾಪನೆ

881 (537) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು): ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?